ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಬಿ. ಬಿ. ಎಂ. ಪಿ. ಕಾಮಗಾರಿ ಬಗ್ಗೆ

ಶ್ರೀ ಅ. ದೇವೇಗೌಡ(ಪದವೀಧರರ ಕ್ಷೇತ್ರ) –

57 (566) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ವಾರ್ಡ್ ಸಂಖ್ಯೆ-42ರಲ್ಲಿನ ಕಂಠೀರವ ಸ್ಟುಡಿಯೋ ಸೋನಾಲ್ ಗಾರ್ಮೆಂಟ್‌ನಿಂದ ಹಾದು ಹೋಗುವ ರಸ್ತೆಯಲ್ಲಿನ ಸುಭಾಶ್ಚಂದ್ರ ವೃತ್ತದಲ್ಲಿ ನಿರ್ಮಾಣವಾಗುತ್ತಿರುವ ಅಂಡರ್‌ಪಾಸ್‌ನ ಕಾಮಗಾರಿಯು ಯಾವಾಗ ಪ್ರಾರಂಭವಾಯಿತು;

(ಆ) ಸದರಿ ಕಾಮಗಾರಿಯು ಅರ್ಧದಲ್ಲಿಯೇ ಅಪೂರ್ಣ ಸ್ಥಿತಿಯಲ್ಲಿದ್ದು, ವಾಹನ ಸಂಚಾರದ ದಟ್ಟಣೆಯಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಕಾಮಗಾರಿಕೆ ಸ್ಥಗಿತಕ್ಕೆ ಕಾರಣವೇನು; ಕಾರಣರಾದವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು; ಮತ್ತು ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು?